ದೂರವಾಣಿ : 7526208

# ಕನಕಪುರ ಯೋಜನಾ ಪ್ರಾಧಿಕಾರ

ಮುನ್ಸಿಪಲ್ ಖಾತಾ ನಂ. 297 : 271, ರಂಗನಾಥ ಸ್ವಾಮಿ ದೇವಸ್ಥಾನ ರಸ್ತೆ, ಕೋಟೆ, ಕನಕಪುರ - 562 117

## ಪ್ರಾರಂಭಿಕ ಪ್ರಮಾಣ ಪತ್ರ

(ನಮೂನೆ-3)

ಸಂಖ್ಯೆ:ಕಯೋಪ್ರಾ:ಎಲ್ಎಒ:05:2009-10 ದಿನಾಂಕ.23-10-2009

**ವಿಷಯ:** ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರ ಹಳ್ಳಿ ಹೋಬಳಿ, ನೆಟ್ಟಿಗೆರೆ ಗ್ರಾಮದ ಸ.ನಂ.15ರಲ್ಲಿ 4-30ಎ:ಗು ಮತ್ತು ಸ.ನಂ.18ರಲ್ಲಿ 4-28ಎ:ಗು ಒಟ್ಟು 9-18ಎ:ಗು ವಿಸ್ತೀರ್ಣದ ಪ್ರದೇಶದಲ್ಲಿ ವಾಸದ ಉಪಯೋಗಕ್ಕಾಗಿ ಬಡಾವಣೆ ನಕ್ಷೆ ಅನುಮೋದನೆ ಬಗ್ಗೆ.

**ಉಲ್ಲೇಖ:** 1) ಅರ್ಜಿದಾರರ ಅರ್ಜಿ ದಿನಾಂಕ:22-06-2009

2) ದಿನಾಂಕ 27.08.2009ರಂದು ಜರುಗಿದ 28ನೇ ಸಭೆಯ ವಿಷಯ ಸಂಖ್ಯೆ4ರ ನಿರ್ಣಯ.

3) ಪ್ರಾಧಿಕಾರಕ್ಕೆ ಹಣಪಾವತಿಸಿದ ದಿನಾಂಕ:07-09-2009.

4) ಅರ್ಜಿದಾರರ ಪರಿತ್ಯಾಜನಾ ಪತ್ರ ದಿನಾಂಕ:09-10-2009.

*********

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1)ರಲ್ಲಿನ ನಿಮ್ಮ ವಿನ್ಯಾಸ ಅನುಮೋದನೆ ಪ್ರಸ್ತಾವನೆಯ ಬಗ್ಗೆ ಉಲ್ಲೇಖ (2)ರ ಕನಕಪುರ ಯೋಜನಾ ಪ್ರಾಧಿಕಾರದ ಸಭೆಯ ನಿರ್ಣಯದಂತೆ, ಹಾಗೂ ಸದರಿ ಪ್ರಕರಣದಲ್ಲಿ ಉಲ್ಲೇಖ (3)ರಂತೆ ಸಂಬಂಧಿತ ಶುಲ್ಕವನ್ನು ಕನಕಪುರ ಯೋಜನಾ ಪ್ರಾಧಿಕಾರಕ್ಕೆ ಪಾವತಿಸಿರುವುದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ ಪ್ರಕರಣ 17ರ ಅಡಿಯಲ್ಲಿ ಶ್ರೀ ಹೆಚ್.ಕೆ.ಗಣೇಶ್ ಬಿನ್.ಹೆಚ್.ವಿ.ಕೃಷ್ಣಮೂರ್ತಿ, ಬೆಂಗಳೂರು. ಇವರಿಗೆ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಬಗ್ಗೆ ಸಂಬಂಧಸಿದಂತೆ ಅಭಿವೃದ್ಧಿ ಕಾರ್ಯ ಪ್ರಾರಂಭಿಸಲು ಅನುಮತಿ ನೀಡಿ ಈ ಕೆಳಗಿನ ನಿಬಂಧನೆಗಳೊಡನೆ ನಕ್ಷೆಯನ್ನು ಅನುಮೋದಿಸಲಾಗಿದೆ.

01. ಈಗ ನೀಡಿರುವ ವಿನ್ಯಾಸ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ ಎರಡು ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಿನ್ಯಾಸದ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳದಿದ್ದಲ್ಲಿ ವಿನ್ಯಾಸದ ಅನುಮೋದನೆಯನ್ನು ನವೀಕರಿಸಿಕೊಳ್ಳತಕ್ಕದ್ದು.

02. ಅನುಮೋದಿತ ರೂಪರೇಖಾ ನಕ್ಷೆಯಂತೆ ವಿನ್ಯಾಸವನ್ನು ಜಮೀನಿನಲ್ಲಿ ಅಭಿವೃದ್ಧಿಪಡಿಸಿದ ನಂತರವೇ ಅಂದರೆ ರಸ್ತೆಯ ನಿರ್ಮಾಣ, ಒಳಚರಂಡಿ ವ್ಯವಸ್ಥೆ, ಕುಡಿಯುವ ನೀರಿನ ಸೌಕರ್ಯ, ವಿದ್ಯುತ್ ವ್ಯವಸ್ಥೆ ಇತ್ಯಾದಿಗಳನ್ನು ನಿರ್ಮಿಸಿದ ನಂತರ ಈ ಪ್ರಾಧಿಕಾರದ ಪರಿಶೀಲನೆಗಾಗಿ ತಿಳಿಸತಕ್ಕದ್ದು ಹಾಗೂ ಉಳಿಕೆ ಶೇ.40 ನಿವೇಶನಗಳನ್ನು ಅಂದರೆ 50 ನಿವೇಶನಗಳ ಬಿಡುಗಡೆಗಾಗಿ ಅರ್ಜಿ ಸಲ್ಲಿಸಿ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.

03. ವಿನ್ಯಾಸ ಪ್ರದೇಶವನ್ನು ಈ ಪ್ರಾಧಿಕಾರದ ಅನುಮೋದನೆ ನೀಡಿದ ಎರಡು ವರ್ಷಗಳೊಳಗಾಗಿ ಸಂಪೂರ್ಣವಾಗಿ (ಉದ್ಯಾನವನ,ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ,, ವಿದ್ಯುತ್ ಸಂಪರ್ಕ) ಅಭಿವೃದ್ಧಿಪಡಿಸತಕ್ಕದ್ದು. ತಪ್ಪಿದ್ದಲ್ಲಿ ಈ ಅನುಮೋದನೆಯು ಯಾವ ಸೂಚನೆಯೂ ಇಲ್ಲದೆ ತಂತಾನೆ ರದ್ದಾಗುತ್ತದೆ.

ಮು.ತಿ.ನೋ.

04.ಪ್ರಸ್ತಾವಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯಲ್ಲಿ ಸಿವೇಜ್ ಟ್ರೀಟ್ಮೆಂಟ್ ಪ್ಲಾಂಟ್ ಅನ್ನು ಸ್ಥಾಪಿಸಬೇಕು ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ವಿಧಿಸುವ ನಿಯಮಗಳನ್ನು ಹಾಗೂ ಷರತ್ತುಗಳನ್ನು ತಪ್ಪದೆ ಪಾಲಿಸತಕ್ಕದ್ದು.

05.ವಿನ್ಯಾಸವನ್ನು ಕಾರ್ಯಗತಗೊಳಿಸುವ ಮೊದಲು ಕರ್ನಾಟಕ ಗ್ರಾಮ ಪಂಚಾಯಿತಿ ಕಾಯ್ದೆಯಡಿ ಅನುಮತಿ ಪಡೆಯತಕ್ಕದ್ದು.

06.ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.

07.ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಮರಗಳನ್ನು ಬೆಳೆಸುವುದು.

08.ಅನುಮೋದಿತ ವಿನ್ಯಾಸದಲ್ಲಿನ ಕಟ್ಟಡಗಳಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

09.ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನಗಳನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು. ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿರುವ ಪ್ರದೇಶಗಳನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.

10.ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಭಂದಿಸತಕ್ಕದ್ದಲ್ಲ.

11.ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ, ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.

12.ಜಮೀನಿಗೆ ಸಂಬಂಧಿಸಿದ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

13.ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಿನ್ಯಾಸಕ್ಕೆ ನೀಡಿರುವ ಅಂಗೀಕಾರ ತಾನೇ ತಾನಾಗಿ ರದ್ದುಗೊಳ್ಳುತ್ತದೆ.

14. ಈ ವಿನ್ಯಾಸದಲ್ಲಿ ಬರುವ ನಿವೇಶನಗಳ ಮಾರಾಟ ಸಂಬಂಧ ನೀಡುವ ಪ್ರಚಾರದಲ್ಲಿ ಪ್ರಾಧಿಕಾರದಿಂದ ಅನುಮೋದನೆ ಆಗಿರುವ ಅನುಮೋದನೆ ಸಂಖ್ಯೆ ಮತ್ತು ದಿನಾಂಕವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

15. ರಸ್ತೆ ಬದಿಯಲ್ಲಿ ಪಾದಚಾರಿಗಳು ಓಡಾಡಲು ಅನುಕೂಲವಾಗುವಂತೆ ಸೂಕ್ತವಾಗಿ ಪಾದಚಾರಿ ಮಾರ್ಗವನ್ನು(paved foot path) ನಿರ್ಮಿಸುವುದು.

16.ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಸೆಕ್ಷನ್ 17(4)ರಂತೆ ಕ್ರಮ ಕೈಗೊಳ್ಳಲು ಪ್ರಾಧಿಕಾರಕ್ಕೆ ಅವಕಾಶವಿರುವುದನ್ನು ನಿಮ್ಮ ಗಮನಕ್ಕೆ ತರಲಾಗಿದೆ.

17.ಅರ್ಜಿದಾರರ ಮನವಿಯಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 112 ಬೆಂರೂಪ್ರಾ 2005 ದಿನಾಂಕ 26-05-2005ರಲ್ಲಿನ ಮಾರ್ಗಸೂಚಿಯಂತೆ ಈ ಕೆಳಕಂಡ ನಿವೇಶನಗಳನ್ನು ನೊಂದಣಿಗಾಗಿ ಬಿಡುಗಡೆ ಮಾಡಲಾಗಿದೆ.

18. ಈ ಪತ್ರದಲ್ಲಿನ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು **ಕೂಡಲೇ** ರದ್ದಾಗುವುದು.

ಶೇಕಡ 60ರಷ್ಟು ಬಿಡುಗಡೆಗೊಳಿಸಿದ **ನಿವೇಶನಗಳ ವಿವರ**

| Sl.No. | Dimensions | Site Numbers | No of Sites |
|---|---|---|---|
| 1. | 9.14M X15.24M | 4,5, 8, 9,16, 17, 20, 21, 26, 27, 34, 35, 36, 37, 38, 39, 40, 41, 42, 43, 44, 45, 46, 47, 50, 51, 52, 53, 54, 55, 56, 57, 58, 59, 60, 61, 62, 63, 67, 68, 69, 70, 71, 76, 77, 78, 79, 80, 82, 83, 84, 85,87, 88, 89, 102, 103, 104, 107 | 59 |
| 2. | 9.14M X 16.22M | 30,31,32 | 3 |
| 3. | 9.14M X16.76M | 10, 11, 12, 13, 14, 15 | 6 |
| 3. | ODD SITES | 2, 3, 22, 23, 28, 29, | 06 |
| | | TOTAL | 74 |

(ಒಟ್ಟು ಎಪ್ಪತ್ತನಾಲ್ಕು ನಿವೇಶನಗಳು ಮಾತ್ರ).

ಸದಸ್ಯ ಕಾರ್ಯದರ್ಶಿ 23/10/09
ಕನಕಪುರ ಯೋಜನಾ ಪ್ರಾಧಿಕಾರ
ಕನಕಪುರ

ಇವರಿಗೆ: 1) ಹಿರಿಯ ಉಪ ನೋಂದಣಾಧಿಕಾರಿಗಳು, ಜೆ.ಪಿ.ನಗರ , ಬೆಂಗಳೂರು.

2) ಕಾರ್ಯದರ್ಶಿಗಳು, ಸೋಮನಹಳ್ಳಿ ಗ್ರಾಮ ಪಂಚಾಯಿತಿ, ಸೋಮನಹಳ್ಳಿ

3) ಶ್ರೀ ಹೆಚ್.ಕೆ.ಗಣೇಶ್ ಬಿನ್.ಹೆಚ್.ವಿ.ಕೃಷ್ಣಮೂರ್ತಿ, ಬೆಂಗಳೂರು.